# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 626(638) |
| ಸದಸ್ಯರ ಹೆಸರು | : | ಶ್ರೀ ಡಿ.ಟಿ ಶ್ರೀನಿವಾಸ್ (ಡಿ.ಟಿ.ಎಸ್)<br>(ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 13.12.2024 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

| ಕ್ರ.ಸ. | ಪ್ರಶ್ನೆ | ಉತ್ತರ |
|---|---|---|
| ಅ | ಪರಿಶಿಷ್ಟ ಜಾತಿ ಕಾಲೋನಿಗಳ ಅಭಿವೃದ್ಧಿಗೆ 2024-25ರ ಸಾಲಿನ ಆಯವ್ಯಯದಲ್ಲಿ ನಿಗಧಿಪಡಿಸಿರುವ ಅನುದಾನ; ಬಿಡುಗಡೆ ಮಾಡಿರುವ ಅನುದಾನ ಮತ್ತು ವೆಚ್ಚ ಮಾಡಿರುವ ಅನುದಾನ ಎಷ್ಟು; | 2024-25ನೇ ಸಾಲಿನ ಆಯವ್ಯಯದಲ್ಲಿ ಪ್ರಗತಿ ಕಾಲೋನಿ ಯೋಜನೆಯ ಅನುಷ್ಠಾನಕ್ಕಾಗಿ ರೂ.108.92 ಕೋಟಿಗಳನ್ನು ನಿಗಧಿಪಡಿಸಿ, ಇದುವರೆವಿಗೂ ಬಿಡುಗಡೆ ಮಾಡಿರುವ ರೂ.81.69 ಕೋಟಿಗಳನ್ನು ಜಿಲ್ಲೆಗಳಿಗೆ ಮರುಬಿಡುಗಡೆ ಮಾಡಲಾಗಿದ್ದು, ಈ ಪೈಕಿ ರೂ.47.42 ಕೋಟಿಗಳು ವೆಚ್ಚವಾಗಿರುತ್ತದೆ. |
| ಆ | 2023-24ರ ಸಾಲಿನಲ್ಲಿ ವಿವಿಧ ನಿಗಮಗಳಿಗೆ ಆಯ್ಕೆಯಾಗಿರುವ ಫಲಾನುಭವಿಗಳಿಗೆ ವಿವಿಧ ಸೌಲಭ್ಯಗಳನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು; | **ಡಾ.ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ:**<br><br>ಡಾ.ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ 2023-24ನೇ ಸಾಲಿನಲ್ಲಿ ಆಯ್ಕೆಯಾದ ಫಲಾನುಭವಿಗಳಿಗೆ ಡಿ.ಬಿ.ಟಿ ತಂತ್ರಾಂಶದ ಮುಖಾಂತರ ಈ ಕೆಳಕಂಡಂತೆ ಯೋಜನೆ/ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.**(ಅನುಬಂಧ-1)**<br><br>1. ಸ್ವಯಂ ಉದ್ಯೋಗ ನೇರಸಾಲ ಯೋಜನೆ<br>2. ಉದ್ಯಮ ಶೀಲತಾ ಯೋಜನೆ-1&2<br>3. ಸ್ವಾವಲಂಬಿ ಸಾರಥಿ ಯೋಜನೆ<br>4. ಭೂ ಒಡೆತನ ಯೋಜನೆ<br>5. ಮೈಕ್ರೋ ಕ್ರೆಡಿಟ್ (ಪ್ರೇರಣಾ)ಯೋಜನೆ<br>6. ಗಂಗಾ ಕಲ್ಯಾಣ ಯೋಜನೆ<br><br>**ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ**<br><br>2023-24ನೇ ಸಾಲಿನಲ್ಲಿ 5950 ಫಲಾನುಭವಿಗಳಿಗೆ ವಿವಿಧ ಸೌಲಭ್ಯಗಳನ್ನು ಮಂಜೂರಾತಿ ನೀಡಿ ರೂ.36.36 ಕೋಟಿಗಳನ್ನು ಆಯ್ಕೆಯಾದ ಫಲಾನುಭವಿಗಳಿಗೆ ಡಿ.ಬಿ.ಟಿ ತಂತ್ರಾಂಶದ ಮುಖಾಂತರ ವೆಚ್ಚ ಮಾಡಲಾಗಿದೆ. **(ಅನುಬಂಧ-2)** |

| | | |
|---|---|---|
| | | **<u>ಕರ್ನಾಟಕ ಆಧಿಜಾಂಬವ ಅಭಿವೃದ್ಧಿ ನಿಗಮ</u>**<br><br>2023-24ನೇ ಸಾಲಿನಲ್ಲಿ ಮಾನ್ಯ ಶಾಸಕರ ಅಧ್ಯಕ್ಷತೆಯ ಆಯ್ಕೆ ಸಮಿತಿಯಲ್ಲಿ ಆಯ್ಕೆಯಾದ ಅರ್ಹ ಫಲಾಪೇಕ್ಷಗಳಿಗೆ ಡಿ.ಬಿ.ಟಿ. ತಂತ್ರಾಂಶದ ಮೂಲಕ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. **(ಅನುಬಂಧ-3)**<br>1. ಸ್ವಯಂ ಉದ್ಯೋಗ ನೇರಸಾಲ ಯೋಜನೆ<br>2. ಉದ್ಯಮ ಶೀಲತಾ ಯೋಜನೆ-ಐ.ಎಸ್.ಬಿ-1<br>3. ಉದ್ಯಮ ಶೀಲತಾ ಯೋಜನೆ-ಐ.ಎಸ್.ಬಿ-2<br>4. ಸ್ವಾವಲಂಭಿ ಸಾರಥಿ ಯೋಜನೆ<br>5. ಮೈಕ್ರೋ ಕ್ರೆಡಿಟ್ ಯೋಜನೆ<br>6. ಭೂ ಒಡೆತನ ಯೋಜನೆ<br>7. ಗಂಗಾ ಕಲ್ಯಾಣ ಯೋಜನೆ<br><br>**ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ:**<br><br>2023-24ನೇ ಸಾಲಿಗೆ ವಿವಿಧ ಅಭಿವೃದ್ಧಿ ಯೋಜನೆಯಡಿ ಮಾನ್ಯ ಶಾಸಕರುಗಳಿಂದ ಆಯ್ಕೆಯಾದ ಫಲಾಪೇಕ್ಷಿಗಳಿಗೆ ಸರ್ಕಾರದ ಆದೇಶದಂತೆ ವಿಶ್ವಾಸ್ (ಕಲ್ಯಾಣ) ಪೋರ್ಟಲ್ ರಡಿ ಖಜಾನೆ ಮುಖಾಂತರ ಅನುದಾನ ಬಿಡುಗಡೆಗೆ ಕ್ರಮವಹಿಸಲಾಗುತ್ತದೆ.**(ಅನುಬಂಧ-4)**<br><br>**ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮ:**<br><br>2023-24ನೇ ಸಾಲಿನಲ್ಲಿ ಜಿಲ್ಲಾಧಿಕಾರಿಗಳ ಆಯ್ಕೆ ಸಮಿತಿಯಲ್ಲಿ ಈ ಕೆಳಕಂಡ ಯೋಜನೆಗಳಡಿ ಆಯ್ಕೆಯಾಗಿರುವ ಫಲಾನುಭವಿಗಳಿಗೆ ಡಿಬಿಟಿ ತಂತ್ರಾಶದ ಮೂಲಕ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ.**(ಅನುಬಂಧ-5)**<br>1. ಸ್ವಯಂ ಉದ್ಯೋಗ ನೇರಸಾಲ ಯೋಜನೆ<br>2. ಉದ್ಯಮ ಶೀಲತಾ ಯೋಜನೆ<br>3. ಉದ್ಯಮ ಶೀಲತಾ ಸ್ವಾವಲಂಭಿ ಸಾರಥಿ ಯೋಜನೆ.<br>4. ಭೂ ಒಡೆತನ ಯೋಜನೆ. |
| ಇ | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳಡಿ ಬರುವ ವಸತಿ ಶಾಲೆಗಳಲ್ಲಿ ಹಿಂದುಳಿದ ವರ್ಗಗಳ ಅಲೆಮಾರಿ/ ಅರೆ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಗೆ ಕಡಿಮೆ ಸೀಟುಗಳನ್ನು | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳಡಿ ಬರುವ ವಸತಿ ಶಾಲೆಗಳಲ್ಲಿ 6 ನೇ ತರಗತಿಗೆ ನಿಗದಿಯಾಗಿರುವ ಸೀಟುಗಳಲ್ಲಿ ವಿಶೇಷ ವರ್ಗದ ಮಕ್ಕಳಿಗೆ ಶೇ.50 ರಷ್ಟು ಸೀಟುಗಳನ್ನು ಪ್ರವೇಶ ಪರೀಕ್ಷೆ ಇಲ್ಲದೆ ನೇರ ಪ್ರವೇಶಾತಿ ಕಲ್ಪಿಸುವ |

<table>
<tr><td></td><td>ನಿಗಧಿಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಸಂಬಂಧ: ಸರ್ಕಾರದ ಆದೇಶ ಸಂಖ್ಯೆ: ಸಕ ಇ 399 ಎಂ.ಡಿ.ಎಸ್ 2022, ಬೆಂಗಳೂರು, ದಿ: 15.03.2024</td></tr>
<tr><td>ಈ</td><td>ಈ ವಸತಿ ಶಾಲೆಯಲ್ಲಿ ಹೆಚ್ಚು ಸೀಟುಗಳು ಲಭ್ಯವಿದ್ದರೂ ಹಿಂದುಳಿದ ಅಲೆಮಾರಿ ವಿದ್ಯಾರ್ಥಿಗಳಿಗೆ ಕಡಿಮೆ ಮೀಸಲು ನಿಗಧಿಪಡಿಸಲು ಕಾರಣವೇನು?</td><td>ರಲ್ಲಿ ವಿಶೇಷ ವರ್ಗಗಳಿಗೆ ಸೇರಿದ ಸಫಾಯಿ ಕರ್ಮಚಾರಿ/ ಗುರುತಿಸಿರುವ ಮ್ಯಾನ್ಯುಯಲ್ ಸ್ಕ್ಯಾವೆಂಜರ್/ ಚಿಂದಿ ಆಯುವವರು/ ಸ್ಮಶಾನ ಕಾರ್ಮಿಕರ ಮಕ್ಕಳಿಗೆ /ಬಾಲ ಕಾರ್ಮಿಕರು/ಜೀತ ವಿಮುಕ್ತ ಕಾರ್ಮಿಕರ ಮಕ್ಕಳು/ ಗುರುತಿಸಿರುವ ಮಾಜಿ ದೇವದಾಸಿಯರ ಮಕ್ಕಳು/25% ಕ್ಕಿಂತ ಹೆಚ್ಚಿನ ಅಂಗಲವಿಕಲತೆ ಹೊಂದಿರುವ ಮಕ್ಕಳು/ ಹೆಚ್.ಐ.ವಿ ಗೆ ತುತ್ತಾದ ಪೋಷಕರ ಮಕ್ಕಳು, ಒಬ್ಬ ಪೋಷಕರನ್ನು ಮಾತ್ರ ಹೊಂದಿರುವ ಅಥವಾ ಅನಾಥ ಮಕ್ಕಳು/. ಗುರುತಿಸಿರುವ ಅಲೆಮಾರಿ/ಅರೆ ಅಲೆಮಾರಿ/ಸೂಕ್ಷ್ಮ-ಅತೀ ಸೂಕ್ಷ್ಮ ಸಮುದಾಯದ/ ಸೈನಿಕರು ಮತ್ತು ಮಾಜಿ ಸೈನಿಕರು/ ಸರ್ಕಾರಿ ಯೋಜನೆಗಳಿಂದ ಸ್ಥಳಾಂತರಗೊಂಡ ಪೋಷಕರ ಮಕ್ಕಳು/. ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡಗಳ ಆಶ್ರಮ ವಸತಿ ಶಾಲೆಗಳಲ್ಲಿ 5ನೇ ತರಗತಿಯಲ್ಲಿ ಉತ್ತೀರ್ಣರಾದ ಮಕ್ಕಳಿಗೆ ಶೇ. 50 ರಷ್ಟು ಸೀಟುಗಳಿಗೆ ನೇರ ಪ್ರವೇಶಾತಿ ಕಲ್ಪಿಸಲು ಅನುಮೋದನೆ ನೀಡಿ ಆದೇಶಿಸಲಾಗಿದ್ದು ವಿವರ ಕೆಳಕಂಡಂತಿದೆ.
<table>
<tr><th>ಕ್ರ. ಸಂ</th><th>ವರ್ಗ</th><th>ಶೇಕಡಾವರು</th></tr>
<tr><td>1</td><td>ಸಫಾಯಿ ಕರ್ಮಚಾರಿ/ ಗುರುತಿಸಿರುವ ಮ್ಯಾನ್ಯುಯಲ್ ಸ್ಕ್ಯಾವೆಂಜರ್/ ಚಿಂದಿ ಆಯುವವರು/ ಸ್ಮಶಾನ ಕಾರ್ಮಿಕರ ಮಕ್ಕಳು</td><td>ಶೇ.10</td></tr>
<tr><td>2</td><td>ಬಾಲ ಕಾರ್ಮಿಕರು/ಜೀತ ವಿಮುಕ್ತ ಕಾರ್ಮಿಕರ ಮಕ್ಕಳು/ ಗುರುತಿಸಿರುವ</td><td>ಶೇ.10</td></tr>
</table>
</td></tr>
</table>

| | | |
|---|---|---|
| | ಮಾಜಿ ದೇವದಾಸಿಯರ ಮಕ್ಕಳು | |
| 3 | 25% ಕ್ಕಿಂತ ಹೆಚ್ಚಿನ ಅಂಗಲಿಕಲತೆ ಹೊಂದಿರುವ ಮಕ್ಕಳು/ ಹೆಚ್.ಐ.ವಿ ಗೆ ತುತ್ತಾದ ಪೋಷಕರ ಮಕ್ಕಳು, ಒಬ್ಬ ಪೋಷಕರನ್ನು ಮಾತ್ರ ಹೊಂದಿರುವ ಅಥವಾ ಅನಾಥ ಮಕ್ಕಳು. | ಶೇ.10 |
| 4 | ಗುರುತಿಸಿರುವ ಅಲೆಮಾರಿ/ಅರೆ ಅಲೆಮಾರಿ/ಸೂಕ್ಷ್ಮ-ಅತೀ ಸೂಕ್ಷ್ಮ ಸಮುದಾಯದ/ ಸೈನಿಕರು ಮತ್ತು ಮಾಜಿ ಸೈನಿಕರು/ ಸರ್ಕಾರಿ ಯೋಜನೆಗಳಿಂದ ಸ್ಥಳಾಂತರಗೊಂಡ ಪೋಷಕರ ಮಕ್ಕಳು. | ಶೇ.10 |
| 5 | ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಆಶ್ರಮ ವಸತಿ ಶಾಲೆಗಳಲ್ಲಿ 5ನೇ ತರಗತಿಯಲ್ಲಿ ಉತ್ತೀರ್ಣರಾದ ಮಕ್ಕಳು. | ಶೇ.10 |
| | ಒಟ್ಟು | ಶೇ.50 |

ಮೇಲ್ಕಂಡಂತೆ ಶೇ 50% ಸೀಟುಗಳನ್ನು ವಿಶೇಷ ವರ್ಗದ ವಿದ್ಯಾರ್ಥಿಗಳಿಗೆ ಪ್ರವರ್ಗವಾರು, (ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗ) ಲಿಂಗವಾರು ಮತ್ತು ಸ್ಥಳೀಯ/ಸ್ಥಳೀಯೇತರ ಮೀಸಲಾತಿಗನುಗುಣವಾಗಿ ಅಭ್ಯರ್ಥಿಗಳಿಗೆ ನೇರ ಪ್ರವೇಶಾತಿ ನೀಡಲಾಗುತ್ತಿದೆ.

| | | |
|---|---|---|
| | | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳಡಿ ಬರುವ ವಸತಿ ಶಾಲೆಗಳಲ್ಲಿ 6 ನೇ ತರಗತಿಗೆ ನಿಗದಿಯಾಗಿರುವ ಸೀಟುಗಳಲ್ಲಿ ಸಾಮಾನ್ಯ ಮೀಸಲಾತಿಯ ಶೇ.50 ರಷ್ಟು ಸೀಟುಗಳನ್ನು ಪ್ರವೇಶ ಪರೀಕ್ಷೆ ಮೂಲಕ ಪ್ರವೇಶಾತಿ ಕಲ್ಪಿಸುವ ಸಂಬಂಧ ಶೇ.50 ರಷ್ಟು ಸೀಟುಗಳ 6ನೇ ತರಗತಿಗೆ ಪ್ರವೇಶಾತಿಗೆ ಸರ್ಕಾರದ ಆದೇಶ ಸಂಖ್ಯೆ: ಸಕಇ 94 ಮೊದೇಶಾ 2020 ಬೆಂಗಳೂರು, ದಿನಾಂಕ 12.11.2021 ದನ್ವಯ ಪ್ರವೇಶ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಪಡೆದ ಅಂಕಗಳ ಆಧಾರದ ಮೇಲೆ ಮೆರಿಟ್ ಪಟ್ಟಿಯನ್ನು ಸಿದ್ವಪಡಿಸಿ, ಆನ್ಲೈನ್ ಸೀಟು ಹಂಚಿಕೆಗೆ ಈ ಕೆಳಕಂಡ ಅಂಶಗಳನ್ನು ಪರಿಗಣಿಸಲಾಗುತ್ತದೆ.<br><br>1.ಅಭ್ಯರ್ಥಿಗಳು ಪ್ರವೇಶ ಪರೀಕ್ಷೆಯಲ್ಲಿ ಪಡೆದ ಅಂಕಗಳು (ಮೆರಿಟ್).<br>2.ಅಭ್ಯರ್ಥಿಗೆ ಅನ್ವಯವಾಗುವ ಪ್ರವರ್ಗವಾರು ಮೀಸಲಾತಿ.<br>3.ಅಭ್ಯರ್ಥಿಯು ಸೇರ ಬಯಸುವ ವಸತಿ ಶಾಲೆಗಳ ಶಾಲಾವಾರು ಆದ್ಯತೆ.<br><br>ಮೇಲ್ಕಂಡ ಅಂಶಗಳ ಆಧಾರದ ಮೇಲೆ seat matrix ಸಿದ್ವಪಡಿಸಿ ಗಣಕೀಕೃತ ಸ್ವಯಂ ಆಯ್ಕೆ (Computerized auto selection) ಮೂಲಕ ಪಾರದರ್ಶಕವಾಗಿ ಸೀಟು ಹಂಚಿಕೆ ಮಾಡಿ ಪ್ರವೇಶಾವಕಾಶ ನೀಡಲಾಗುತ್ತಿದೆ.<br><br>ಮೇಲ್ಕಂಡ ಎಲ್ಲಾ ಆದೇಶಗಳ ಅಡಿಯಲ್ಲಿ ಆಯಾ ವರ್ಗಗಳಲ್ಲಿ ಅನ್ವಯವಾಗುವ ರೀತಿಯಲ್ಲಿ ಪ್ರವೇಶಾವಕಾಶ ಕಲ್ಪಿಸಲಾಗಿದ್ದು, ಅಲೆಮಾರಿ ವಿದ್ಯಾರ್ಥಿಗಳಿಗೆ ಆಯಾ ಪ್ರವರ್ಗ ಹಾಗೂ ವಿಶೇಷ ವರ್ಗಗಳಿಗೆ ಸೇರಿದ ವರ್ಗಗಳ ಮೀಸಲಾತಿಗೆ ಅನುಗುಣವಾಗಿ ಸೀಟು ಹಂಚಿಕೆಯನ್ನು ಮಾಡಲಾಗುತ್ತಿದೆ. |

| | | |
|---|---|---|
| | | ವಿಶೇಷ ವರ್ಗದ ಮಕ್ಕಳಿಗೆ ಶೇ.50 ರಷ್ಟು ಸೀಟುಗಳನ್ನು ಪ್ರವೇಶ ಪರೀಕ್ಷೆ ಇಲ್ಲದೆ ನೇರ ಪ್ರವೇಶಾತಿ ಕಲ್ಪಿಸುವ ಸಂಬಂಧ ಸರ್ಕಾರದ ಆದೇಶ ಹೊರಡಿಸಲಾಗಿರುವ ಮಾಹಿತಿಯನ್ನು **ಅನುಬಂಧ-6ರಲ್ಲಿ** ಒದಗಿಸಲಾಗಿದೆ. |

**ಸಂಖ್ಯೆ:ಸಕಇ 895 ಪಕವಿ 2024**

**(ಡಾ. ಹೆಚ್.ಸಿ. ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**

ಡಾ: ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ
(ಕರ್ನಾಟಕ ಸರ್ಕಾರದ ಉದ್ಯಮ)
೯ನೇ ಮಹಡಿ, ವಿಶ್ವೇಶ್ವರಯ್ಯ ಚಿಕ್ಕಗೋಪುರ, ಡಾ: ಅಂಬೇಡ್ಕರ್ ವೀದಿ,
ಬೆಂಗಳೂರು-560001
AMBEDKAR DEVELOPMENT CORPORATION
ದೂರವಾಣಿ ಸಂಖ್ಯೆ: 080-22868870, 22867097, 22865192 ಫ್ಯಾಕ್ಸ್-080-22860396
e-mail: mdadcl2011@gmail.com

ಸಂಖ್ಯೆ:ಅಂಅನಿ/ಸಮನ್ವಯ/ಎಲ್ಎಕ್ಯೂ/ಎಲ್ ಸಿ.ಕ್ಯೂ:2024-25 ದಿನಾಂಕ:09.12.2023

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು
ಸಮಾಜ ಕಲ್ಯಾಣ ಇಲಾಖೆ
ವಿಕಾಸ ಸೌಧ
ಬೆಂಗಳೂರು-ಇವರಿಗೆ

ಮಾನ್ಯರೆ,

ವಿಷಯ: ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ. ಡಿ. ಟಿ. ಶ್ರೀನಿವಾಸ್ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 626(638) ಕ್ಕೆ ಉತ್ತರಿಸುತ್ತಿರುವ ಬಗ್ಗೆ.

*******

ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ. ಡಿ. ಟಿ. ಶ್ರೀನಿವಾಸ್ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿನ/ಗುರುತಿಲ್ಲದ ಪ್ರಶ್ನೆ ಸಂಖ್ಯೆ 626 (638) ಕ್ಕೆ ಉತ್ತರವನ್ನು ತಯಾರಿಸಿ ಈ ಪತ್ರದೊಂದಿಗೆ ಲಗತ್ತಿಸಿ ತಮ್ಮ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ

**ವ್ಯವಸ್ಥಾಪಕ ನಿರ್ದೇಶಕರು**

# ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 626(638) |
| ವಿಧಾನ ಸಭೆಯ ಸದಸ್ಯರ ಹೆಸರು | : | ಶ್ರೀ.ಡಿ.ಟಿ ಶ್ರೀನಿವಾಸ್ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 13.12.2024 |
| ವಿಷಯ | : | ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಗಳ ಫಲಾನುಭವಿಗಳ ಕಾಮಗಾರಿಗಳ ಅಭಿವೃದ್ಧಿಗೆ ಬಿಡುಗಡೆ ಅನುದಾನದ ವಿವರದ ಬಗ್ಗೆ. |
| ಉತ್ತರಿಸಬೇಕಾದವರು | : | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರಗಳು |
|---|---|---|
| ಅ | ಪರಿಶಿಷ್ಟ ಜಾತಿ ಕಾಲೋನಿಗಳ ಅಭಿವೃದ್ಧಿಗೆ 2024-25ರ ಸಾಲಿನ ಆಯವ್ಯಯದಲ್ಲಿ ನಿಗದಿ ಪಡಿಸಿರುವ ಅನುದಾನ ಬಿಡುಗಡೆ ಮಾಡಿರುವ ಅನುದಾನ ಮತ್ತು ವೆಚ್ಚ ಮಾಡಿರುವ ಅನುದಾನ ಎಷ್ಟು; | ಅನ್ವಯಿಸುವುದಿಲ್ಲ |
| ಆ | 2023-24ರ ಸಾಲಿನಲ್ಲಿ ವಿವಿಧ ನಿಗಮಗಳಿಗೆ ಆಯ್ಕೆಯಾಗಿರುವ ಫಲಾನುಭವಿಗಳಿಗೆ ವಿವಿಧ ಸೌಲಭ್ಯಗಳನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು | ಡಾ.ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ 2023-24ನೇ ಸಾಲಿನಲ್ಲಿ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br>1. ಸ್ವಯಂ ಉದ್ಯೋಗ ನೇರಸಾಲ ಯೋಜನೆ<br>2. ಉದ್ಯಮ ಶೀಲತಾ ಯೋಜನೆ-1 & 2<br>3. ಸ್ವಾವಲಂಬಿ ಸಾರಥಿ ಯೋಜನೆ<br>4. ಭೂ ಒಡೆತನ ಯೋಜನೆ<br>5. ಮೈಕ್ರೊ ಕ್ರೆಡಿಟ್ (ಪ್ರೇರಣಾ) ಯೋಜನೆ<br>6. ಗಂಗಾ ಕಲ್ಯಾಣ ಯೋಜನೆ<br>ಸದರಿ ಸಾಲಿನಲ್ಲಿ ಆಯ್ಕೆಯಾದ ಫಲಾನುಭವಿಗಳಿಗೆ ಡಿ.ಬಿ.ಟಿ.ತಂತ್ರಾಂಶದ ಮುಖಾಂತರ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. |
| ಇ | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳಡಿ ಬರುವ ವಸತಿ ಶಾಲೆಗಳಲ್ಲಿ ಹಿಂದುಳಿದ ವರ್ಗಗಳ ಅಲೆಮಾರಿ/ಅರೆ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಗೆ ಕಡಿಮೆ ಸೀಟುಗಳನ್ನು ನಿಗದಿಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಅನ್ವಯಿಸುವುದಿಲ್ಲ |
| ಈ | ಈ ವಸತಿ ಶಾಲೆಯಲ್ಲಿ ಹೆಚ್ಚು ಸೀಟುಗಳು ಲಭ್ಯವಿದ್ದರೂ ಹಿಂದುಳಿದ ಅಲೆಮಾರಿ ವಿದ್ಯಾರ್ಥಿಗಳಿಗೆ ಕಡಿಮೆ ಮೀಸಲು ನಿಗದಿಪಡಿಸಲು ಕಾರಣವೇನು? | ಅನ್ವಯಿಸುವುದಿಲ್ಲ |

ವ್ಯವಸ್ಥಾಪಕ ನಿರ್ದೇಶಕರು

ಕರ್ನಾಟಕ ಸರ್ಕಾರ
ಸಮಾಜ ಕಲ್ಯಾಣ ಇಲಾಖೆ
ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ
Karnataka State Safai Karmachari Development Corporation
ಸೈರಾ ಬಾಗ್, ನಂ.19/4, 3ನೇ ಮಹಡಿ, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು-560052
Saira Bagh. No.19/4, 3rd Floor, Cunnigham Road,
Bangalore-560052 . e-mail id: ksskdc03@gmail.com

ಸಂಖ್ಯೆ: ಕರಾಸಕಅನಿ/ವಿ.ಪ/ಸಿ.ಆರ್-129/2024-25 ದಿನಾಂಕ:12.12.2024

**ಇವರಿಗೆ**,
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ,
ಬೆಂಗಳೂರು.

ಮಾನ್ಯರೆ,

ವಿಷಯ ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ. ಡಿ. ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 626(638) ಕ್ಕೆ ಉತ್ತರವನ್ನು ಒದಗಿಸುವ ಬಗ್ಗೆ.

ಉಲ್ಲೇಖ ವಿಧಾನ ಸಭೆ ಪತ್ರ ಸಂಖ್ಯೆ : ಎಲ್ ಸಿ ಕ್ಯೂ:638: 154ನೇಅ:2024 ದಿನಾಂಕ:29.11.2024

****

ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದನ್ವಯ ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ. ಡಿ. ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 626(638) ಕ್ಕೆ ಉತ್ತರವನ್ನು. ಈ ಪತ್ರದೊಂದಿಗೆ ಲಗತ್ತಿಸಿ ತಮ್ಮ ಅವಗಾಹನೆಗೆ ಸಲ್ಲಿಸಿದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

ವ್ಯವಸ್ಥಾಪಕ ನಿರ್ದೇಶಕರು

## ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ. ಡಿ. ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 626(638) ಕ್ಕೆ ಉತ್ತರ**

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಪರಿಶಿಷ್ಟ ಜಾತಿ ಕಾಲೋನಿಗಳ ಅಭಿವೃದ್ಧಿಗೆ 2024-25 ರ ಸಾಲಿನ ಆಯವ್ಯಯದಲ್ಲಿ ನಿಗಧಿ ಪಡಿಸಿರುವ ಅನುದಾನ: ಬಿಡುಗಡೆ ಮಾಡಿರುವ ಅನುದಾನ ಮತ್ತು ವೆಚ್ಚ ಮಾಡಿರುವ ಅನುದಾನ ಎಷ್ಟು: | ಅನ್ವಯಿಸುವುದಿಲ್ಲ |
| ಆ | 2023-24ರ ಸಾಲಿನಲ್ಲಿ ವಿವಿಧ ನಿಗಮಗಳಿಗೆ ಆಯ್ಕೆಯಾಗಿರುವ ಫಲಾನುಭವಿಗಳಿಗೆ ವಿವಿಧ ಸೌಲಭ್ಯಗಳನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು | 2023-24ನೇ ಸಾಲಿನಲ್ಲಿ 5950 ಫಲಾನುಭವಿಗಳಿಗೆ ವಿವಿಧ ಸೌಲಭ್ಯಗಳನ್ನು ಮಂಜೂರಾತಿ ನೀಡಿ, ರೂ.36.36 ಕೋಟಿಗಳನ್ನು ವೆಚ್ಚ ಮಾಡಲಾಗಿದೆ. |
| ಇ | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳಡಿ ಬರುವ ವಸತಿ ಶಾಲೆಗಳಲ್ಲಿ ಹಿಂದುಳಿದ ವರ್ಗಗಳ ಅಲೆಮಾರಿ/ ಅರೆ ಅಲೆಮಾರಿ ಜನಾಂಗದ ವಿದ್ಯರ್ಥಿಗಳಿಗೆ ಕಡಿಮೆ ಸೀಟುಗಳನ್ನು ನಿಗಧಿಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಅನ್ವಯಿಸುವುದಿಲ್ಲ |
| ಈ | ಈ ವಸತಿ ಶಾಲೆಯಲ್ಲಿ ಹೆಚ್ಚು ಸೀಟುಗಳು ಲಭ್ಯವಿದ್ದರೂ ಹಿಂದುಳಿದ ಅಲೆಮಾರಿ ವಿದ್ಯಾರ್ಥಿಗಳಿಗೆ ಕಡಿಮೆ ಮೀಸಲು ನಿಗಧಿಪಡಿಸಲು ಕಾರನವೇನು? | ಅನ್ವಯಿಸುವುದಿಲ್ಲ |

ವ್ಯವಸ್ಥಾಪಕ ನಿರ್ದೇಶಕರು

ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ
(ಕರ್ನಾಟಕ ಸರ್ಕಾರದ ಒಂದು ಉದ್ಯಮ)
ನಂ. 17/5, ಓಟ್ಲಾಂಗ್ ಬ್ಲಾಕ್, 2ನೇ ಮಹಡಿ, ಯೂನಿಟಿ ಕಟ್ಟಡ, ಜೆ.ಸಿ.ರಸ್ತೆ, ಬೆಂಗಳೂರು-560002

ಸಂಖ್ಯೆ:ಕಆಜಾಅನಿ/ವಿ.ಪ /626/ ಸಿ.ಆರ್-233/2024-25 ದಿನಾಂಕ:10.12.2024

ಇವರಿಗೆ,

ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಸಮಾಜ ಕಲ್ಯಾಣ ಇಲಾಖೆ,
ವಿಕಾಸ ಸೌಧ,
ಬೆಂಗಳೂರು,

ಮಾನ್ಯರೇ

ವಿಷಯ: ವಿಧಾನಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ. ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್.) (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) ಇವರ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 626 (638) ಕ್ಕೆ ಉತ್ತರ- ಉತ್ತರಿಸಬೇಕಾದ ದಿನಾಂಕ:13.12.2024

ಉಲ್ಲೇಖ: ಸರ್ಕಾರದ ಪತ್ರದ ಸಂಖ್ಯೆ: ಪ್ರ ಶಾ ವಿ ಸ/ 16 ನೇ ವಿ ಸ/5 ನೇ ಅ/ಪ್ರ ಸಂ / 2337 /2024 ದಿನಾಂಕ:02.12.2024

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದನ್ವಯ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ. ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್.) (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) ಇವರ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 626 (638) ಕ್ಕೆ ಉತ್ತರ ಸಿದ್ದಪಡಿಸಿ ಈ ಪತ್ರದೊಂದಿಗೆ ಲಗತ್ತಿಸಿ ತಮ್ಮ ಅವಗಾಹನೆಗೆ ಸಲ್ಲಿಸಿದೆ.

ವಂದನೆಗಳೊಂದಿಗೆ

ತಮ್ಮ ವಿಶ್ವಾಸಿ

10/12/24

ವ್ಯವಸ್ಥಾಪಕ ನಿರ್ದೇಶಕರು

ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ

ವಿಧಾನಪರಿಷತ್ತ ಮಾನ್ಯ ಸದಸ್ಯರಾದ ಶ್ರೀ. ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್.) (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) ಇವರ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 626 (638) ಕ್ಕೆ ಉತ್ತರ.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪರಿಶಿಷ್ಟ ಜಾತಿ ಕಾಲೋನಿಗಳ 2024 -25 ರ ಸಾಲಿನ ಆಯುವ್ಯಯದಲ್ಲಿ ನಿಗಧಿಪಡಿಸಿರುವ ಅನುದಾನ ; ಬಿಡುಗಡೆ ಮಾಡಿರುವ ಅನುದಾನ ಮತ್ತು ವೆಚ್ಚ ಮಾಡಿರುವ ಅನುದಾನ ಎಷ್ಟು. | ಈ ನಿಗಮಕ್ಕೆ ಅನ್ವಯಿಸುವುದಿಲ್ಲ |
| ಆ) | 2023-24 ರ ಸಾಲಿನಲ್ಲಿ ವಿವಿಧ ನಿಗಮಗಳಲ್ಲಿ ಆಯ್ಕೆಯಾಗಿರುವ ಫಲಾನುಭವಿಗಳಿಗೆ ವಿವಿಧ ಸೌಲಭ್ಯಗಳನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಬಂದಿದ್ದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು | ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮವು ಕಾರ್ಯನಿರ್ವಹಿಸುತ್ತಿದೆ. ಈ ನಿಗಮವು ದಿ:20.01.2020 ರಿಂದ ಅಧಿಕೃತವಾಗಿ ಚಾಲನೆಗೊಂಡು ಕಾರ್ಯನಿರ್ವಹಿಸುತ್ತಿದೆ. ಸದರಿ ನಿಗಮದಿಂದ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನ ಗೊಳಿಸಲಾಗುತ್ತಿದೆ.<br>1) ಸ್ವಯಂ ಉದ್ಯೋಗ ನೇರಸಾಲ ಯೋಜನೆ<br>2) ಉದ್ಯಮ ಶೀಲತಾ ಯೋಜನೆ- ಐ.ಎಸ್. ಬಿ-1<br>3) ಉದ್ಯಮ ಶೀಲತಾ ಯೋಜನೆ- ಐ.ಎಸ್. ಬಿ-2<br>4) ಸ್ವಾವಲಂಭಿ ಸಾರಥಿ ಯೋಜನೆ<br>5) ಮೈಕ್ರೋ ಕ್ರೆಡಿಟ್ ಯೋಜನೆ(<br>6) ಭೂ ಒಡೆತನ ಯೋಜನೆ<br>7) ಗಂಗಾ ಕಲ್ಯಾಣ ಯೋಜನೆ<br>2023-24 ನೇ ಸಾಲಿನಲ್ಲಿ ಮಾನ್ಯ ಶಾಸಕರ ಅದ್ಯಕ್ಷತೆಯ ಆಯ್ಕೆ ಸಮಿತಿಯಲ್ಲಿ ಆಯ್ಕೆಯಾದ ಅರ್ಹ ಫಲಾಪೇಕ್ಷಗಳಿಗೆ ಡಿ.ಬಿ.ಟಿ ತಂತ್ರಾಂಶದ ಮೂಲಕ ಸೌಲಭ್ಯ ಕಲ್ಪಿಸಲು ಕ್ರಮವಹಿಸಲಾಗುತ್ತಿದೆ. |
| ಇ) | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳಡಿ ಬರುವ ವಸತಿ ಶಾಲೆಗಳಲ್ಲಿ ಹಿಂದುಳಿದ ವರ್ಗಗಳ ಅಲೆಮಾರಿ / ಅರೆ ಅಲೆಮಾರಿ ಜನಾಂಗದ ವಿಧ್ಯಾರ್ಥಿಗಳಿಗೆ ಕಡೆಮೆ ಸೀಟುಗಳನ್ನು ನಿಗಧಿಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಈ ನಿಗಮಕ್ಕೆ ಅನ್ವಯಿಸುವುದಿಲ್ಲ |
| ಈ | ಈ ವಸತಿ ಶಾಲೆಯಲ್ಲಿ ಹೆಚ್ಚು ಸೀಟುಗಳು ಲಭ್ಯವಿದ್ದರೂ ಹಿಂದಳಿದ ಅಲೆಮಾರಿ ವಿಧ್ಯಾರ್ಥಿಗಳಿಗೆ ಕಡಿಮೆ ಮೀಸಲು ನಿಗಧಿಪಡಿಸಲು ಕಾರಣವೇನು? | ಈ ನಿಗಮಕ್ಕೆ ಅನ್ವಯಿಸುವುದಿಲ್ಲ |

ವ್ಯವಸ್ಥಾಪಕ ನಿರ್ದೇಶಕರು

# ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ

(ಕರ್ನಾಟಕ ಸರ್ಕಾರದ ಸ್ವಾಮ್ಯಕ್ಕೆ ಒಳಪಟ್ಟಿದೆ)

20 ನೇ ಮಹಡಿ, ವಿಶ್ವೇಶ್ವರಯ್ಯದೊಡ್ಡಗೋಪುರ, ಡಾ॥ ಬಿ.ಆರ್‌ಅಂಬೇಡ್ಕರ್ ವೀಧಿ,ಬೆಂಗಳೂರು-560001,

ದೂರವಾಣಿ ಸಂಖ್ಯೆ:-080-23198122 ಇ-ಮೇಲ್ ವಿಳಾಸ:md.kbdc2022@gmail.com

ಸಂಖ್ಯೆ:-ಕಭೋಅನಿ/ವಿ.ಸ/ಸಿಆರ್-35/2024-25 ದಿನಾಂಕ:-10-12-2024

ಇವರಿಗೆ,
ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಸಮಾಜ ಕಲ್ಯಾಣ ಇಲಾಖೆ .
ಬೆಂಗಳೂರು-01.

ಮಾನ್ಯರೆ,

ವಿಷಯ :- ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಡಿ.ಟಿ ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ:626 (638) ಕ್ಕೆ ಉತ್ತರ ನೀಡುವ ಬಗ್ಗೆ.

ಉಲ್ಲೇಖ :- ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ ಇವರ ಪ್ರಶ್ನೆ ಸಂಖ್ಯೆ:- ಎಲ್‌ಸಿ ಕ್ಯೂ:638:154ನೇ ಅ:224, ದಿನಾಂಕ:-30-11-2024

******

ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಡಿ.ಟಿ ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ: 626 (638) ಕ್ಕೆ ಉತ್ತರಿಸುವಂತೆ ಉಲ್ಲೇಖಿತ ಪತ್ರದಲ್ಲಿ ಸೂಚಿಸಲಾಗಿರುತ್ತದೆ.

ಅದರಂತೆ ಅಗತ್ಯ ಮಾಹಿತಿಯನ್ನು ತಯಾರಿಸಿ, ಈ ಪತ್ರಕ್ಕೆ ಲಗತ್ತಿಸಿ ತಮ್ಮ ಅವಗಾಹನೆಗಾಗಿ ಸಲ್ಲಿಸಿದೆ.

ಗೌರವಪೂರ್ವಕ ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

ವ್ಯವಸ್ಥಾಪಕ ನಿರ್ದೇಶಕರು
ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ

# ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ

ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀ ಡಿ.ಟಿ ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂ: 626 (638) ಉತ್ತರ.

ಉತ್ತರಿಸಬೇಕಾದ ದಿನಾಂಕ:13.12.2024

| ಕ್ರಸ | ಪ್ರಶ್ನೆ | ನಿಗಮದ ಉತ್ತರ |
|---|---|---|
| ಅ | ಪರಿಶಿಷ್ಟ ಜಾತಿ ಕಾಲೋನಿಗಳ ಅಭಿವೃದ್ಧಿಗೆ 2024-25 ರ ಸಾಲಿನ ಆಯವ್ಯಯದಲ್ಲಿ ನಿಗದಿಪಡಿಸಿರುವ ಅನುದಾನ, ಬಿಡುಗಡೆ ಮಾಡಿರುವ ಅನುದಾನ ಮತ್ತು ವೆಚ್ಚ ಮಾಡಿರುವ ಅನುದಾನ ಎಷ್ಟು; | ಕರ್ನಾಟಕ ಭೋವಿ ಅಭಿವೃದ್ಧಿ ನಿಗಮಕ್ಕೆ ಅನ್ವಯಿಸುವುದಿಲ್ಲ. |
| ಆ | 2023-24ರ ಸಾಲಿನಲ್ಲಿ ವಿವಿಧ ನಿಗಮಗಳಿಗೆ ಆಯ್ಕೆಯಾಗಿರುವ ಫಲಾನುಭವಿಗಳಿಗೆ ವಿವಿಧ ಸೌಲಭ್ಯಗಳನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು | ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದಿಂದ 2023-24ನೇ ಸಾಲಿಗೆ ವಿವಿಧ ಅಭಿವೃದ್ಧಿ ಯೋಜನೆಯಡಿ ಮಾನ್ಯ ಶಾಸಕರುಗಳಿಂದ ಆಯ್ಕೆಯಾದ ಫಲಾಪೇಕ್ಷಿಗಳಿಗೆ ಸರ್ಕಾರದ ಆದೇಶದಂತೆ ವಿಶ್ವಾಸ್ (ಕಲ್ಯಾಣ) ಪೋರ್ಟಲ್‌ರಡಿ ಖಜಾನೆ ಮುಖಾಂತರ ಅನುದಾನ ಬಿಡುಗಡೆಗೆ ಕ್ರಮವಹಿಲಾಗುತ್ತಿದೆ. |
| ಇ | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳಡಿ ಬರುವ ವಸತಿ ಶಾಲೆಗಳಲ್ಲಿ ಹಿಂದುಳಿದ ವರ್ಗಗಳ ಅಲೆಮಾರಿ/ಅರೆ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಗೆ ಕಡಿಮೆ ಸೀಟುಗಳನ್ನು ನಿಗಧಿಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕರ್ನಾಟಕ ಭೋವಿ ಅಭಿವೃದ್ಧಿ ನಿಗಮಕ್ಕೆ ಅನ್ವಯಿಸುವುದಿಲ್ಲ. |
| ಈ | ಈ ವಸತಿ ಶಾಲೆಯಲ್ಲಿ ಹೆಚ್ಚು ಸೀಟುಗಳು ಲಭ್ಯವಿದ್ದರೂ ಹಿಂದುಳಿದ ಅಲೆಮಾರಿ ವಿದ್ಯಾರ್ಥಿಗಳಿಗೆ ಮೀಸಲು ನಿಗಧಿಪಡಿಸಲು ಕಾರಣವೇನು? | ಕರ್ನಾಟಕ ಭೋವಿ ಅಭಿವೃದ್ಧಿ ನಿಗಮಕ್ಕೆ ಅನ್ವಯಿಸುವುದಿಲ್ಲ. |

ವ್ಯವಸ್ಥಾಪಕ ನಿರ್ದೇಶಕರು
ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ

# ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮ

12ನೇಮಹಡಿ. ವಿ.ವಿದೊಡ್ಡಗೋಪುರ. ಡಾ.ಬಿ.ಆರ್. ಅಂಬೇಡ್ಕರ್ ವೀಧಿಬೆಂಗಳೂರು
560001,ದೂರವಾಣಿಸಂಖ್ಯೆ:080-22868069 ಇ-ಮೇಲ್:-md.scstndc@gmail.com


**ಸಂಖ್ಯೆ: ಪಜಾ/ಪಪಂ.ಅಅನಿ./ವಿ.ಪ್ರಶ್ನಾವಳಿ: 2024-25/** 884 **ದಿ: 12.12.2024**

ರವರಿಗೆ,
ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಸಮಾಜ ಕಲ್ಯಾಣ ಇಲಾಖೆ,
ವಿಕಾಸ ಸೌಧ,
ಬೆಂಗಳೂರು.

ಮಾನ್ಯರೇ,

ವಿಷಯ: ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ.ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು )ಇವರ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 626( 638) ಕ್ಕೆ ಉತ್ತರಿಸುವ ಕುರಿತು.

ಉಲ್ಲೇಖ: ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: ಎಲ್ ಸಿಕ್ಯೂ/638/154ನೇಅ/2024 ದಿ: 29.11.2024

*****

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ.ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) ಇವರ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 626 (638) ಕ್ಕೆ ಉತ್ತರವನ್ನು ತಯಾರಿಸಿ ಈ ಪತ್ರದೊಂದಿಗೆ ಲಗತ್ತಿಸಿ ತಮ್ಮ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

ವಂದನೆಗಳೊಂದಿಗೆ

ತಮ್ಮ ವಿಶ್ವಾಸಿ,
Mallikarjun MK

**ವ್ಯವಸ್ಥಾಪಕ ನಿರ್ದೇಶಕರು**

[illegible] ಅಭಿವೃದ್ಧಿ ನಿಗಮ, ಕೇಂದ್ರ ಕಛೇರಿ ಬೆಂಗಳೂರು.

| | | |
|---|---|---|
| ಚುಕ್ಕೆ ಗುರುತಿನ / ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 626 (638) |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ.ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 13.12.2024 |
| ವಿಷಯ | : | ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಗಳ ಫಲಾನುಭವಿಗಳ ಕಾಮಗಾರಿಗಳ ಅಭಿವೃದ್ಧಿಗೆ ಬಿಡುಗಡೆ ಅನುದಾನದ ವಿವರದ ಬಗ್ಗೆ. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪರಿಶಿಷ್ಟ ಜಾತಿ ಕಾಲೋನಿಗಳ 2024-25 ರ ಸಾಲಿನ ಆಯವ್ಯಯದಲ್ಲಿ ನಿಗಧಿಪಡಿಸಿರುವ ಅನುದಾನ; ಬಿಡುಗಡೆ ಮಾಡಿರುವ ಅನುದಾನ ಮತ್ತು ವೆಚ್ಚ ಮಾಡಿರುವ ಅನುದಾನ ಎಷ್ಟು; | ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮಕ್ಕೆ ಅನ್ವಯಿಸುವುದಿಲ್ಲ. |
| ಆ) | 2023-24 ರ ಸಾಲಿನಲ್ಲಿ ವಿವಿಧ ನಿಗಮಗಳಲ್ಲಿ ಆಯ್ಕೆಯಾಗಿರುವ ಫಲಾನುಭವಿಗಳಿಗೆ ವಿವಿಧ ಸೌಲಭ್ಯಗಳನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಬಂದಿದ್ದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದಿಂದ 2023-24ನೇ ಸಾಲಿನಲ್ಲಿ ಈ ಕೆಳಕಂಡ ಯೋಜನೆಗಳಡಿ ಮಾನ್ಯ ಜಿಲ್ಲಾಧಿಕಾರಿಗಳ ಆಯ್ಕೆ ಸಮಿತಿಯಲ್ಲಿ ಆಯ್ಕೆಯಾಗಿರುವ ಫಲಾನುಭವಿಗಳಿಗೆ ಡಿ.ಬಿ.ಟಿ ತಂತ್ರಾಂಶದ ಮೂಲಕ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ,<br>1. ಸ್ವಯಂ ಉದ್ಯೋಗ (ನೇರ ಸಾಲ)<br>2. ಉದ್ಯಮ ಶೀಲತಾ ಯೋಜನೆ (ರೂ.2.00 ಲಕ್ಷ)<br>3. ಉದ್ಯಮ ಶೀಲತಾ ಸ್ವಾವಲಂಬಿ ಸಾರಥಿ ಯೋಜನೆ (ರೂ.4.00 ಲಕ್ಷ)<br>4. ಭೂ ಒಡೆತನ ಯೋಜನೆ |
| ಇ) | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳಡಿ ಬರುವ ವಸತಿ ಶಾಲೆಗಳಲ್ಲಿ ಹಿಂದುಳಿದ ವರ್ಗಗಳ ಅಲೆಮಾರಿ /ಅರೆಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಗೆ ಕಡಿಮೆ ಸೀಟುಗಳನ್ನು ನಿಗಧಿಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮಕ್ಕೆ ಅನ್ವಯಿಸುವುದಿಲ್ಲ. |
| ಈ) | ಈ ವಸತಿ ಶಾಲೆಯಲ್ಲಿ ಹೆಚ್ಚು ಸೀಟುಗಳು ಲಭ್ಯವಿದ್ದರೂ ಹಿಂದುಳಿದ ಅಲೆಮಾರಿ ವಿದ್ಯಾರ್ಥಿಗಳಿಗೆ ಕಡಿಮೆ ಮೀಸಲು ನಿಗಧಿಪಡಿಸಲು ಕಾರಣವೇನು? | ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮಕ್ಕೆ ಅನ್ವಯಿಸುವುದಿಲ್ಲ. |

ವ್ಯವಸ್ಥಾಪಕ ನಿರ್ದೇಶಕರು

**<u>ಕರ್ನಾಟಕ ಸರ್ಕಾರದ ನಡವಳಿಗಳು</u>**

| | |
|---|---|
| **ವಿಷಯ:** | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಲ್ಲಿ 6ನೇ ತರಗತಿಗೆ ಪ್ರವೇಶಾವಕಾಶವನ್ನು ನೀಡಲು ಮೀಸಲಾತಿಯನ್ನು ಪರಿಷ್ಕರಿಸುವ ಕುರಿತು. |
| **ಓದಲಾಗಿದೆ:** | 1) ಸರ್ಕಾರದ ಆದೇಶ ಸಂಖ್ಯೆ: ಸಕಇ 94 ಮೊದೇಶಾ 2020, ದಿನಾಂಕ:19.06.2021 ಮತ್ತು ತಿದ್ದುಪಡಿ ಆದೇಶ ದಿನಾಂಕ:12.11.2021.<br>2) ಸರ್ಕಾರದ ಆದೇಶ ಸಂಖ್ಯೆ: ಸಕಇ 399 ಎಂಡಿಎಸ್ 2022, ದಿನಾಂಕ: 18.07.2022,<br>3) ಸರ್ಕಾರದ ಆದೇಶ ಸಂಖ್ಯೆ: ಸಕಇ 399 ಎಂಡಿಎಸ್ 2022, ದಿನಾಂಕ:03.02.2023.<br>4) ಸರ್ಕಾರದ ಆದೇಶ ಸಂಖ್ಯೆ: ಸಕಇ 399 ಎಂಡಿಎಸ್ 2022, ದಿನಾಮಕ:03.07.2023.<br>5) ಸರ್ಕಾರದ ಆದೇಶ ಸಂಖ್ಯೆ: ಸಕಇ 399 ಎಂಡಿಎಸ್ 2022, ದಿನಾಂಕ:19.10.2023.<br>6) ಸರ್ಕಾರದ ಆದೇಶ ಸಂಖ್ಯೆ: ಸಕಇ 399 ಎಂಡಿಎಸ್ 2022, ದಿನಾಂಕ:14.11.2023. |

*****

<u>ಪ್ರಸ್ತಾವನೆ :</u>

ಮೇಲೆ ಓದಲಾದ ಕ್ರಮಾಂಕ (1) ರ ಆದೇಶದಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ 826 ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ/ಡಾ|| ಬಿ.ಆರ್ ಅಂಬೇಡ್ಕರ್/ಅಟಲ್ ಬಿಹಾರಿ ವಾಜಪೇಯಿ/ಶ್ರೀಮತಿ ಇಂದಿರಾಗಾಂಧಿ/ ಏಕಲವ್ಯ ಮಾದರಿ ವಸತಿ ಶಾಲೆ/ಕಾಲೇಜುಗಳ ಪೈಕಿ 800 ವಸತಿ ಶಾಲೆಗಳಿಗೆ 6ನೇ ತರಗತಿಗೆ ಲಭ್ಯವಾಗುವ ಸೀಟುಗಳಿಗೆ ಅನುಗುಣವಾಗಿ ಪ್ರವೇಶ ಕಲ್ಪಿಸಲು ನಿಬಂಧನೆ, ಷರತ್ತು ಮತ್ತು ಮಾರ್ಗಸೂಚಿಗಳಿಗೆ ಅನುಮೋದನೆ ನೀಡಿ ಆದೇಶಿಸಲಾಗಿದೆ. ಸದರಿ ಆದೇಶಕ್ಕೆ ದಿನಾಂಕ:12.11.2021 ರಂದು ನಿಬಂಧನೆ/ಷರತ್ತು/ಮಾರ್ಗಸೂಚಿಗಳ ಅಂಶ 9 ಮತ್ತು 10 ಕ್ಕೆ ತಿದ್ದುಪಡಿ ಮಾಡಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (2) ರ ಆದೇಶದಲ್ಲಿ 2022-23 ನೇ ಸಾಲಿನಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಲ್ಲಿ 6 ನೇ ತರಗತಿಗೆ ಸಫಾಯಿ ಕರ್ಮಚಾರಿಗಳ ಮಕ್ಕಳಿಗೆ ಮೀಸಲಾತಿ ನಿಗಧಿಪಡಿಸಿರುವಷ್ಟು ಭರ್ತಿಯಾಗದೆ ಖಾಲಿ ಉಳಿದಿರುವ ಸೀಟುಗಳಿಗೆ ಜಿಲ್ಲಾ ಮತ್ತು ನಗರ ಮತ್ತು ಗ್ರಾಮೀಣ ಸ್ಥಳೀಯ ಸಂಸ್ಥೆಗಳಲ್ಲಿ ವ್ಯಾಪಕ ಪ್ರಚಾರ ನೀಡಿ ಸ್ಥಳೀಯವಾಗಿ ಅರ್ಜಿ ಆಹ್ವಾನಿಸಿ ವಸತಿ ಶಾಲಾ ಮಟ್ಟದಲ್ಲಿ ಆಯಾ ಪ್ರಾಂಶುಪಾಲರುಗಳಿಂದ ಪ್ರವೇಶ ಪರೀಕ್ಷೆ, ನಡೆಸಿ ಸಫಾಯಿ ಕರ್ಮಚಾರಿಗಳ ಮಕ್ಕಳನ್ನು ದಾಖಲು ಮಾಡಿಕೊಳ್ಳಲು ಅನುಮೋದನೆ ನೀಡಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (3) ರ ಆದೇಶದ ದಿನಾಂಕ: 03.02.2023 ರಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಿಗೆ ಪೌರಕಾರ್ಮಿಕರ/ ಸಫಾಯಿ ಕರ್ಮಚಾರಿ/ ಮ್ಯಾನ್ಯುಯಲ್ ಸ್ಕ್ಯಾವೆಂಜರ್/ ಸ್ಮಶಾನ ಕಾರ್ಮಿಕರ/ ದೇವದಾಸಿ ಈ ಸಮುದಾಯದ ಮಕ್ಕಳಿಗೆ 2023-24 ನೇ ಸಾಲಿನ ವಸತಿ ಶಾಲೆಗಳಲ್ಲಿ 6ನೇ ತರಗತಿಗೆ ಪ್ರವೇಶ ಪರೀಕ್ಷೆಯಿಂದ ವಿನಾಯಿತಿ ನೀಡಿ ಆದೇಶಿಸಲಾಗಿದೆ.

2—

ಮೇಲೆ ಓದಲಾದ ಕ್ರಮಾಂಕ (4) ರ ಆದೇಶದ ದಿನಾಂಕ: 03.07.2023 ರಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಿಗೆ ಅಲೆಮಾರಿ, ಅರೆ ಅಲೆಮಾರಿ ಸಮುದಾಯ ಮಕ್ಕಳಿಗೆ 2023-24 ನೇ ಸಾಲಿನ ವಸತಿ ಶಾಲೆಗಳ 6ನೇ ತರಗತಿಗೆ ಪ್ರವೇಶ ಪರೀಕ್ಷೆಯಿಲ್ಲದೆ ಯಾವುದೇ ವಸತಿ ಶಾಲೆಗಳಿಗೆ ಪ್ರವೇಶ ಕಲ್ಪಿಸಲು ಜಿಲ್ಲಾ ಮತ್ತು ನಗರ ಮತ್ತು ಗ್ರಾಮೀಣ ಸ್ಥಳೀಯವಾಗಿ ವ್ಯಾಪಕ ಪ್ರಚಾರ ನೀಡಿ, ಶಿಕ್ಷಣದ ಅರಿವು ಮೂಡಿಸಿ ದಾಖಲಾತಿ ಮಾಡಿಕೊಳ್ಳಲು ಅನುಮೋದನೆ ನೀಡಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (5) ರ ಆದೇಶದ ದಿನಾಂಕ:19.10.2023 ರಲ್ಲಿ ವಾಲ್ಮೀಕಿ ಆಶ್ರಮ ಶಾಲೆಯಲ್ಲಿ 5ನೇ ತರಗತಿಯಲ್ಲಿ ಉತ್ತೀರ್ಣರಾಗಿರುವ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ವಸತಿ ಶಾಲೆಗಳಿಗೆ ಪ್ರವೇಶ ಪರೀಕ್ಷೆ ಇಲ್ಲದೆ ನೇರವಾಗಿ 6ನೇ ತರಗತಿಗೆ ದಾಖಲಾತಿ ಮಾಡಿಕೊಳ್ಳಲು ಸಂಬಂಧಪಟ್ಟ ಆಶ್ರಮ ಶಾಲೆಯ ಮುಖ್ಯೋಪಧ್ಯಾಯರಿಂದ ವ್ಯಾಸಂಗ ಪ್ರಮಾಣ ಪಡೆಯುವ ಷರತ್ತಿಗೊಳಪಟ್ಟು ಅನುಮೋದನೆ ನೀಡಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (6) ರ ಆದೇಶದ ದಿನಾಂಕ:16.11.2023 ರಲ್ಲಿ ಮ್ಯಾನುಯಲ್ ಸ್ಕ್ಯಾವೆಂಜರ್‌ಗಳ ಮಕ್ಕಳು ಮತ್ತು ಮೊಮ್ಮಕ್ಕಳಿಗೂ ಸಹ ಪ್ರತಿಷ್ಠಿತ ಶಾಲೆಗಳಲ್ಲಿ ಹಾಗೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಲ್ಲಿ ಪ್ರವೇಶಾವಕಾಶವನ್ನು ಪ್ರಸ್ತುತ ಸಫಾಯಿ ಕರ್ಮಚಾರಿ ಮಕ್ಕಳಿಗೆ ಮೀಸಲಿಟ್ಟಿರುವ ಶೇ.5 ರಷ್ಟು ಸ್ಥಾನಗಳಿಗೆ ಗುರುತಿಸಲ್ಪಟ್ಟ ಮ್ಯಾನುಯಲ್ ಸ್ಕ್ಯಾವೆಂಜರ್ ಮಕ್ಕಳ ಪ್ರಮಾಣ ಪತ್ರ ಮತ್ತು ಸಂಬಂಧ ಪಟ್ಟ ಪ್ರಾಧಿಕಾರಗಳಿಂದ ಮೊಮ್ಮಕ್ಕಳ ವಂಶವೃಕ್ಷ ಪರಿಶೀಲಿಸಿ, ಪ್ರವೇಶಾವಕಾಶವನ್ನು ಕಲ್ಪಿಸಲು ಅನುಮೋದನೆ ನೀಡಿ ಆದೇಶಿಸಲಾಗಿದೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಪರಿಶಿಷ್ಟ ಜಾತಿ-503, ಪರಿಶಿಷ್ಟ ವರ್ಗ-156 ಮತ್ತು ಹಿಂದುಳಿದ ವರ್ಗ-174 ಒಟ್ಟಾರೆ 833 ವಸತಿ ಶಾಲೆ/ಕಾಲೇಜುಗಳು ಕಾರ್ಯನಿರ್ವಹಿತ್ತಿವೆ. ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ 807 ವಸತಿ ಶಾಲೆಗಳಿಗೆ ಪ್ರತಿ ವರ್ಷ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳ 41120 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ನೀಡುತ್ತಿದ್ದು, ವಿಶೇಷ ವರ್ಗದ ಮಕ್ಕಳಿಗೆ 20,000 ಸೀಟುಗಳನ್ನು (50%) ಕಾಯ್ದಿರಿಸಲಾಗಿದೆ ಜೊತೆಗೆ ಶುಲ್ಕ ರಹಿತ, ಸಮವಸ್ತ್ರ, ಲೇಖನ ಸಾಮಗ್ರಿಗಳು ಇತ್ಯಾದಿ ಮೂಲಭೂತ ಸೌಕರ್ಯಗಳನ್ನು ಉಚಿತವಾಗಿ ಸರ್ಕಾರವು ಒದಗಿಸುತ್ತಿದೆ. 6 ನೇ ತರಗತಿಯ ಪ್ರವೇಶಾತಿಯಲ್ಲಿ ರಾಜ್ಯದ ಎಲ್ಲಾ ತಾಲ್ಲೂಕಿನ ಸ್ಥಳೀಯ ಅಭ್ಯರ್ಥಿಗಳಿಗೆ ಶೇ.75, ಅದೇ ಜಿಲ್ಲೆಯ ಇತರೆ ತಾಲ್ಲೂಕಿನ ಅಭ್ಯರ್ಥಿಗಳಿಗೆ ಶೇ.25 ರಷ್ಟು ಮೀಸಲಾತಿ ನೀಡಲಾಗಿರುತ್ತದೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳ 6ನೇ ತರಗತಿ ಪ್ರವೇಶಾತಿಗೆ ಸಂಬಂಧಿಸಿದಂತೆ ಹಿಂದಿನ ಆದೇಶಗಳ ಮೀಸಲಾತಿಯನ್ನು ಪರಿಶೀಲಿಸಿ, ವಿಶೇಷ ವರ್ಗಗಳಿಗೆ ಈ ಕೆಳಕಂಡಂತೆ ಮೀಸಲಾತಿಯನ್ನು ಪರಿಷ್ಕರಿಸಲು ನಿರ್ಧರಿಸಿದೆ.

| ಕ್ರ. ಸಂ | ವರ್ಗ | ಶೇಕಡ ವಾರು ಹಂಚಿಕೆ |
|---|---|---|
| 1 | ಸಫಾಯಿ ಕರ್ಮಚಾರಿ/ಗುರುತಿಸಿರುವ ಮ್ಯಾನ್ಯುಯಲ್ ಸ್ಕ್ಯಾವೆಂಜರ್/ ಚಿಂದಿ ಆಯುವವರು/ಸ್ಮಶಾನ ಕಾರ್ಮಿಕರ ಮಕ್ಕಳು. | 10% |
| 2 | ಬಾಲ ಕಾರ್ಮಿಕರು/ಜೀತ ವಿಮುಕ್ತ ಕಾರ್ಮಿಕರ ಮಕ್ಕಳು /ಗುರುತಿಸಿರುವ ಮಾಜಿ ದೇವದಾಸಿಯರ ಮಕ್ಕಳು. | 10% |

3—

| | | |
|---|---|---|
| 3 | 25% ಕ್ಕಿಂತ ಹೆಚ್ಚಿನ ಅಂಗವಿಕಲತೆ ಹೊಂದಿರುವ ಮಕ್ಕಳು/ಎಚ್‌ಐವಿಗೆ ತುತ್ತಾದ ಪೋಷಕರ ಮಕ್ಕಳು, ಒಬ್ಬ ಪೋಷಕರನ್ನು ಮಾತ್ರ ಹೊಂದಿರುವ ಅಥವಾ ಅನಾಥ ಮಕ್ಕಳು. | 10% |
| 4 | ಗುರುತಿಸಿರುವ ಅಲೆಮಾರಿ/ಅರೆ ಅಲೆಮಾರಿ/ಸೂಕ್ಷ್ಮ-ಅತಿ ಸೂಕ್ಷ್ಮ ಸಮುದಾಯದ/ಸೈನಿಕರು ಮತ್ತು ಮಾಜಿ ಸೈನಿಕರು/ಸರ್ಕಾರಿ ಯೋಜನೆಗಳಿಂದ ಸ್ಥಳಾಂತರ ಗೊಂಡ ಪೋಷಕರ ಮಕ್ಕಳು. | 10% |
| 5 | ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಆಶ್ರಮ ವಸತಿ ಶಾಲೆಗಳಲ್ಲಿ 5 ನೇ ತರಗತಿಯಲ್ಲಿ ಉತ್ತೀರ್ಣರಾದ ಮಕ್ಕಳು. | 10% |

ಮೇಲ್ಕಂಡ ವಿಶೇಷ ವರ್ಗಗಳ ಮಕ್ಕಳಿಗೆ ಉತ್ಕೃಷ್ಟ ಶಿಕ್ಷಣವನ್ನು ನೀಡುವ ಉದ್ದೇಶದಿಂದ ಶಿಕ್ಷಣದ ಬಗ್ಗೆ ಅರಿವು ಮೂಡಿಸಿ, ಮೀಸಲಾತಿಯನ್ನು ಕಲ್ಪಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 399 ಎಂಡಿಎಸ್ 2022, ಬೆಂಗಳೂರು, ದಿನಾಂಕ:15.03.2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಬರುವ 807 ವಸತಿ ಶಾಲೆಗಳಿಗೆ ಈ ಕೆಳಕಂಡಂತೆ ವಿಶೇಷ ವರ್ಗಗಳಿಗೆ ಮೀಸಲಾತಿಯನ್ನು ನಿಗಧಿಪಡಿಸಿ, 6ನೇ ತರಗತಿಗೆ ಪ್ರವೇಶ ಕಲ್ಪಿಸಲು ಅನುಮೋದನೆ ನೀಡಿ ಆದೇಶಿಸಿದೆ.

| ಕ್ರ. ಸಂ | ವರ್ಗ | ಶೇಕಡ ವಾರು ಹಂಚಿಕೆ |
|---|---|---|
| 1 | ಸಫಾಯಿ ಕರ್ಮಚಾರಿ/ಗುರುತಿಸಿರುವ ಮ್ಯಾನ್ಯುಯಲ್ ಸ್ಕ್ಯಾವೆಂಜರ್/ ಚಿಂದಿ ಆಯುವವರು/ಸ್ಮಶಾನ ಕಾರ್ಮಿಕರ ಮಕ್ಕಳು. | 10% |
| 2 | ಬಾಲ ಕಾರ್ಮಿಕರು/ಜೀತ ವಿಮುಕ್ತ ಕಾರ್ಮಿಕರ ಮಕ್ಕಳು /ಗುರುತಿಸಿರುವ ಮಾಜಿ ದೇವದಾಸಿಯರ ಮಕ್ಕಳು. | 10% |
| 3 | 25% ಕ್ಕಿಂತ ಹೆಚ್ಚಿನ ಅಂಗವಿಕಲತೆ ಹೊಂದಿರುವ ಮಕ್ಕಳು/ಎಚ್‌ಐವಿಗೆ ತುತ್ತಾದ ಪೋಷಕರ ಮಕ್ಕಳು, ಒಬ್ಬ ಪೋಷಕರನ್ನು ಮಾತ್ರ ಹೊಂದಿರುವ ಅಥವಾ ಅನಾಥ ಮಕ್ಕಳು. | 10% |
| 4 | ಗುರುತಿಸಿರುವ ಅಲೆಮಾರಿ/ಅರೆ ಅಲೆಮಾರಿ/ಸೂಕ್ಷ್ಮ-ಅತಿ ಸೂಕ್ಷ್ಮ ಸಮುದಾಯದ/ಸೈನಿಕರು ಮತ್ತು ಮಾಜಿ ಸೈನಿಕರು/ಸರ್ಕಾರಿ ಯೋಜನೆಗಳಿಂದ ಸ್ಥಳಾಂತರ ಗೊಂಡ ಪೋಷಕರ ಮಕ್ಕಳು. | 10% |
| 5 | ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಆಶ್ರಮ ವಸತಿ ಶಾಲೆಗಳಲ್ಲಿ 5 ನೇ ತರಗತಿಯಲ್ಲಿ ಉತ್ತೀರ್ಣರಾದ ಮಕ್ಕಳು. | 10% |

ಷರತ್ತುಗಳು:

1) ಮೊದಲು ಅರ್ಜಿ ಸಲ್ಲಿಸಿರುವಂತಹವರಿಗೆ ಮೊದಲ ಆದ್ಯತೆ ಮೇಲ ಪ್ರವೇಶಾತಿ ನೀಡುವುದು.

2) ಸರ್ಕಾರದ ಆದೇಶ ಸಂಖ್ಯೆ: ಸಕಇ 94 ಮೊದೇಶಾ 2020, ದಿನಾಂಕ:19.06.2021 ಹಾಗೂ ತಿದ್ದುಪಡಿ ಆದೇಶ ದಿನಾಂಕ:12.11.2021 ರಲ್ಲಿರುವ ನಿಬಂಧನೆ/ಷರತ್ತು/ ಮಾರ್ಗಸೂಚಿಗಳನ್ನು ಅನುಷ್ಠಾನಗೊಳಿಸತಕ್ಕದ್ದು.
3) ಪ್ರವೇಶಾತಿ ಸಂದರ್ಭದಲ್ಲಿ ಮೇಲ್ಕಂಡ ವರ್ಗಗಳಲ್ಲಿ ಯಾವುದಾದರು ವರ್ಗದಲ್ಲಿ ಸೀಟುಗಳು ಖಾಲಿ ಉಳಿದಲ್ಲಿ ಉಳಿದ ವರ್ಗಗಳ ಅರ್ಜಿಗಳನ್ನು ಪರಿಗಣಿಸುವುದು.
4) ಪ್ರವೇಶಾತಿ ನೀಡುವ ಸಂದರ್ಭದಲ್ಲಿ ಪಾರದರ್ಶಕತೆ ಕಾಪಾಡುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

M. Sumitra

(ಎಂ. ಸುಮಿತ್ರ)
ಸರ್ಕಾರದ ಉಪ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ.

<u>ಇವರಿಗೆ:-</u>

1. ಮಹಾಲೇಖಪಾಲರು, (ಎ & ಇ ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
5. ನಿರ್ದೇಶಕರು, ಪರಿಶಿಷ್ಟ ಪಂಡಗಳ ಕಲ್ಯಾಣ ಇಲಾಖೆ, ಬೆಂಗಳೂರು.
6. ಎಲ್ಲಾ ಜಿಲ್ಲಾಧಿಕಾರಿಗಳು.
7. ಎಲ್ಲಾ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ಜಿಲ್ಲಾ ಪಂಚಾಯತ್.
8. ಎಲ್ಲಾ ಜಿಲ್ಲೆಗಳ ಜಂಟಿ/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ.
9. ಎಲ್ಲಾ ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.
10. ಎಲ್ಲಾ ಜಿಲ್ಲಾ ಪರಿಶಿಷ್ಟ ಪಂಗಡಗಳ ಕಲ್ಯಾಣಾಧಿಕಾರಿಗಳು.
11. ಖಜನಾಧಿಕಾರಿ, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

<u>ಪ್ರತಿಗಳು:</u>

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
2. ಮಾನ್ಯ ಪರಿಶಿಷ್ಟ ಪಂಗಡಗಳ ಕಲ್ಯಾಣ, ಯುವಜನ ಸಬಲೀಕರಣ, ಕ್ರೀಡಾ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
3. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ.
6. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.